# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 129
ಸದಸ್ಯರ ಹೆಸರು : ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 19.12.2022
ಉತ್ತರಿಸುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು; | ಶಿವಮೊಗ್ಗ ಜಿಲ್ಲೆಯಲ್ಲಿ 93 ಮತ್ತು ದಾವಣಗೆರೆ ಜಿಲ್ಲೆಯಲ್ಲಿ 80 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. |
| ಆ) | ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಎಷ್ಟು ಮೊತ್ತದ ಹಣವನ್ನು ಮೀಸಲಿಟ್ಟಿದೆ ಹಾಗೂ ಎಷ್ಟು ಅವಧಿಯೊಳಗೆ ಈ ಕಾರ್ಯ ಪೂರ್ಣಗೊಳ್ಳುತ್ತದೆ; (ವಿವರ ನೀಡುವುದು) | ಹೌದು<br>2022-23ರ ಆಯವ್ಯಯ ಘೋಷಣೆ ಕಂಡಿಕೆ ಸಂಖ್ಯೆ: 88 (ಎ) ರಲ್ಲಿ ರಾಜ್ಯದಲ್ಲಿ ಹೆಚ್ಚು ಕಾರ್ಯ ಒತ್ತಡವಿರುವ 100 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು 25 ಹಾಸಿಗೆಯ ಮಾದರಿ ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲು ಉದ್ದೇಶಿಸಿದೆ. ಸದರಿ ಯೋಜನೆಗೆ ಸರ್ಕಾರದ ಆದೇಶ ಸಂಖ್ಯೆ: ಆಕುಕ/137/ಸಿಜಿಎಂ/2022, ದಿನಾಂಕ:08.04.2022 ರಲ್ಲಿ ರೂ.1000.00 ಕೋಟಿ ಅನುದಾನವನ್ನು ನಿಗಧಿಪಡಿಸಲಾಗಿದೆ. ಈ ಯೋಜನೆಯನ್ನು 2 ವರ್ಷಗಳ ಅವಧಿಯಲ್ಲಿ ಅನುಷ್ಠಾನಗೊಳಿಸಲಾಗುವುದು. |
| ಇ) | ಶಿವಮೊಗ್ಗ ಆಯುಷ್ ವಿಶ್ವವಿದ್ಯಾಲಯದ ಸ್ಥಾಪನೆಯು ಯಾವ ಹಂತದಲ್ಲಿದೆ; ಈ ವಿಶ್ವವಿದ್ಯಾಲಯ ಯಾವಾಗ ಪ್ರಾರಂಭವಾಗುವುದು? (ಮಾಹಿತಿ ನೀಡುವುದು) . | ಶಿವಮೊಗ್ಗ ನಗರದಲ್ಲಿ ಆಯುಷ್ ವಿಶ್ವವಿದ್ಯಾಲಯಕ್ಕಾಗಿ ರೂ.25.00 ಕೋಟಿಗಳ ವೆಚ್ಚದಲ್ಲಿ ಸಿವಿಲ್ ಕಾಮಗಾರಿಗಳನ್ನು ಕೈಗೊಳ್ಳಲು ನೀಲಿನಕ್ಷೆ ಹಾಗೂ ಅಂದಾಜುಪಟ್ಟಿಯನ್ನೊಳಗೊಂಡಂತೆ Detail Project Report ನ್ನು ಆಯುಷ್ ಆಯುಕ್ತರಿಂದ ಪಡೆದು ಪರಿಶೀಲಿಸಲಾಗುವುದು. |

**ಕಡತ ಸಂಖ್ಯೆ: ಆಕುಕ 150 ಎಸ್.ಬಿ.ವಿ. 2022**

(ಡಾ|| ಕೆ. ಸುಧಾಕರ್)
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ**
**ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು**